**<u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**
**<u>ಸಿ.ಸಿ.1979/2023</u>**

| | | |
|---|---|---|
| ಸಾಕ್ಷಿದಾರರ ಹೆಸರು | : ವನಿತಾ. ಎಂ | ಪ್ರಾಸಾ-9 |
| ಗಂಡನ ಹೆಸರು | : ರಮೇಶ್ ಎನ್.ಟಿ | ಚಾಸಾ-14 |
| ವಯಸ್ಸು | : 40 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕಾನ್ಸ್ ಟೇಬಲ್ | ದಿನಾಂಕಃ 08.07.2025. |
| ವಾಸಸ್ಥಳ | : ಮೂಡಿಗೆರೆ ಪೋಲಿಸ್ ಠಾಣೆ. | |

**<u>:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:</u>**

ನಾನು ದಿ.10.09.2017 ರಿಂದ ದಿ.22.08.2023 ರವರೆಗೂ ನಾನು ಬಣಕಲ್ ಪೋಲಿಸ್ ಠಾಣೆಯಲ್ಲಿ ಕಾನ್ಸ್ ಟೇಬಲ್ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.12.05.2023 ರಂದು ಚಾಸಾ-1 ರವರು ಸ.16.00 ರ ಸಮಯಕ್ಕೆ ಠಾಣೆಗೆ ಬಂದು ನೀಡಿದ ದೂರನ್ನು ಸ್ವೀಕರಿಸಿ, ಠಾಣಾ.ಮೊ.ನಂ.51/2023 ರಂತೆ, ಕಲಂ 279, 304(ಎ) of IPC ಮತ್ತು 187 of IMV ರಡಿಯಲ್ಲಿ ಪ್ರಕರಣವನ್ನು ದಾಖಲಿಸಿರುತ್ತೇನೆ. ನಂತರ 16.30 ರ ಸಮಯಕ್ಕೆ ಚಾಸಾ-15 ರವರ ಮುಖೇನ ಕಡತವನ್ನು ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-18 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ.ವ.ವ ಯಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಪ್ರ.ವ.ವ ನ್ನು ನಿಪಿ-16, ಅದರಲ್ಲಿರುವ ಸಾಕ್ಷಿಯು ಸಹಿಯನ್ನು ನಿಪಿ-16(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ.ಎಸ್.ಎ. ವಕೀಲರಿಂದಃ</u>**

ನಾನು ನನ್ನ ಮೇಲಾಧಿಕಾರಿಗಳ ಮಾತಿನ ಮೇರೆಗೆ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ-1 ರವರು ಯಾವುದೇ ರೀತಿಯ ದೂರನ್ನು ದಾಖಲಿಸಿರುವುದಿಲ್ಲ, ನಾವುಗಳೇ ನಿಪಿ-1 ನ್ನು ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.